ಶ್ರೀ ಡಿ. ಮಂಜುನಾಥ್ (ಕಾರ್ಮಿಕ ಮಂತ್ರಿಗಳು).—

ಅ) ಯುನೈಟೆಡ್ ಬ್ರಿವೇರಿಸ್ ಸಂಸ್ಥೆಯು ಮುಚ್ಚಿಲ್ಲ. ಅದು ಕಾರ್ಯ ಮಾಡುತ್ತಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಜಯನಗರ ಉಕ್ಕಿನ ಕಾರ್ಖಾನೆ ಬಗ್ಗೆ

೧೩೪೯. ಶ್ರೀ ಎಂ. ಎಸ್. ಕೃಷ್ಣನ್ (ರಾಜಾಜಿನಗರ).—ಮಾನ್ಯ ಭಾರಿ ಉಕ್ಕು ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ವಿಜಯನಗರ ಉಕ್ಕಿನ ಕಾರ್ಖಾನೆಯ ಸ್ಥಾಪನೆಯ ಬಗ್ಗೆ ಕೇಂದ್ರ ಸರ್ಕಾರ ಸ್ಥಾಪನೆ ಮಾಡ ಬೇಕಾಗಿಲ್ಲವೆಂಬ ಅಭಿಪ್ರಾಯಕ್ಕೆ ಬಂದಿದೆ ಎಂಬುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ವಿಜಯನಗರ ಉಕ್ಕಿನ ಕಾರ್ಖಾನೆ ಸ್ಥಾಪನೆ ಮಾಡಲು ಮೆಚ್ಚ ಎಷ್ಟಾಗುತ್ತದೆ ಇದುವರೆವಿಗೂ ಎಷ್ಟು ಖರ್ಚಾಗಿದೆ ಹಾಗೂ ಕೇಂದ್ರ ಸರ್ಕಾರದವರು ಇದಕ್ಕಾಗಿ ಎಷ್ಟು ನಿಧಿ ಸಹಾಯ ಮಾಡಿದ್ದಾರೆ ?

ಇ) ಈ ಉಕ್ಕಿನ ಕಾರ್ಖಾನೆ ಸ್ಥಾಪನೆಯಾಗಲು ರಾಜ್ಯ ಸರ್ಕಾರದವರು ಕೈಗೊಂಡಿರುವ ಕಾರ್ಯ ಕ್ರಮಗಳೇನು ?

ಶ್ರೀ ಜೆ. ಹೆಚ್. ಪಟೇಲ್ (ಭಾರಿ ಉಕ್ಕು ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳು).—

ಅ) ಇಲ್ಲ.

ಆ) ಮೊದಲನೇ ಹಂತಕ್ಕೆ ೪೫೦ ಕೋಟಿ
ಇಲ್ಲಿಯವರೆವಿಗೂ ೯೯ ಕೋಟಿ ರೂಪಾಯಿಗಳು ಖರ್ಚಾಗಿದೆ. ಎಲ್ಲಾ ಖರ್ಚು ಕೇಂದ್ರ ಸರ್ಕಾರ ವಹಿಸಿ ಕೊಳ್ಳುತ್ತದೆ.

ಇ) ಸಂಪೂರ್ಣ ಕಾರ್ಯವನ್ನು ಕೇಂದ್ರ ಸರ್ಕಾರ ಮಾಡಬೇಕಾಗಿದೆ ಅಗತ್ಯವಾದ ಭೂಮಿ ಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ರಾಜ್ಯ ಸರ್ಕಾರ, ಬೇಕಾಗುವ ನೀರು ಹಾಗೂ ವಿದ್ಯುತ್ ಪೂರೈಕೆಯನ್ನು ಸರಬರಾಜು ಮಾಡುವ ಬಗ್ಗೆ ಭರವಸೆಯನ್ನು ನೀಡಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎ. ಲಕ್ಷ್ಮೀಸಾಗರ್.—ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಸಂಬಂಧಪಟ್ಟ ಉತ್ತರ ಗಳನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಉತ್ತರಗಳನ್ನು ಸಭೆಯ ಮುಂದಿಡಲಾಗಿದೆ.

ನಂಜನಗೂಡಿನಲ್ಲಿ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

೧೪೫೪. ಶ್ರೀ ಹೆಚ್. ಸಿ. ಮಹದೇವಪ್ಪ (ಟಿ. ನರಸೀಪುರ).—ಮಾನ್ಯ ಭಾರಿ ಹಾಗೂ ಮಧ್ಯಮ ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ನಂಜನಗೂಡಿನಲ್ಲಿ ಎಷ್ಟು ಹೊಸ ಕೈಗಾರಿಕೆಗಳು ಸ್ಥಾಪನೆಯಾಗಿವೆ ?

ಆ) ಅಲ್ಲಿ ನೌಕರಿ ಕೊಡುವಾಗ ಸ್ಥಳೀಯರಿಗೆ ಅವಕಾಶ ಕೊಡಲಾಗಿದೆಯೇ ?

ಇ) ಹಾಗಿದ್ದಲ್ಲಿ ಸರ್ಕಾರದವರು ಸ್ಥಳೀಯರಿಗೆ ಉದ್ಯೋಗಾವಕಾಶ ಕಲ್ಪಿಸುವ ಆದೇಶವನ್ನು ಕೈಗಾರಿಕೋದ್ಯಮಿಗಳಿಗೆ ನೀಡುವರೆ ?